**ಸಾಕ್ಷಿಗೆ ದಿನಾಂಕ:10-07-2025 ರಂದು ಪುನಃ ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.**

**:: ಮುಂದುವರೆದ ಪಾಟೀ ಸವಾಲು :: ಪ್ರತಿವಾದಿ ಪರ ಶ್ರೀ.DNP ವಕೀಲರಿಂದ ::**

ನಾನು ವಾದ ಪತ್ರದಲ್ಲಿ ಯಾವ ದಿನಾಂಕದಿಂದ ದಾವಾ ಶೆಡ್ಯೂಲ್ ಸ್ವತ್ತಿನ ಪ್ರತಿಕೂಲ ಸ್ವಾಧೀನದಲ್ಲಿ ಇರುತ್ತೇನೆ ಎಂದು ಎಲ್ಲೂ ನಮೂದು ಮಾಡಿರುವುದಿಲ್ಲ ಎಂದರೆ ನನಗೆ ಅದರ ಬಗ್ಗೆ ಗೊತ್ತಿಲ್ಲ. ನಾನು ದಾವಾ ಶೆಡ್ಯೂಲ್ ಸ್ವತ್ತಿನ ಪ್ರತಿಕೂಲ ಸ್ವಾಧೀನದಲ್ಲಿ ಇರುತ್ತೇನೆಂದು ಹೇಳಿ ಪ್ರತಿವಾದಿಗಳಿಗೆ ಯಾವುದೇ ನೋಟೀಸ್ ನೀಡಿರುವುದಿಲ್ಲ ಎಂದರೆ ಸರಿ. ಪ್ರತಿವಾದಿಗಳ ತಂದೆ ಜಿಂಗಾಡೆ ರುದ್ರಪ್ಪ ರವರು ಯಾವಾಗ ಮೃತ ಹೊಂದಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಸದರಿಯವರು 1975 ರಲ್ಲಿ ತೀರಿಕೊಂಡಿರುವ ವಿಚಾರ ನನಗೆ ಗೊತ್ತಿಲ್ಲ. ನನಗೆ ಪ್ರತಿವಾದಿಗಳ ಬಗ್ಗೆ ಯಾವುದೇ ಮಾಹಿತಿ ಗೊತ್ತಿರುವುದಿಲ್ಲ ಎಂದರೆ ಸರಿಯಲ್ಲ. ನಾನು ದಾವಾ ಶೆಡ್ಯೂಲ್ ಸ್ವತ್ತಿನ ಸ್ವಾಧೀನದಲ್ಲಿ ಯಾವತ್ತು ಸಹ ಇರುವುದಿಲ್ಲ ಎಂದರೆ ಸರಿಯಲ್ಲ. ನಾನು ದಾವಾ ಶೆಡ್ಯೂಲ್ ಸ್ವತ್ತಿನಲ್ಲಿ ಸಾಗುವಳಿ ಮಾಡುತ್ತಿರುವ ಬಗ್ಗೆ ತೋರಿಸಲು ಯಾವುದೇ ದಾಖಲಾತಿಗಳನ್ನು ಕಂದಾಯ ಇಲಾಖೆಯಿಂದ ಪಡೆದುಕೊಂಡಿರುವುದಿಲ್ಲ. ದಾವಾ ಶೆಡ್ಯೂಲ್ ಸ್ವತ್ತಿನ ಬಗ್ಗೆ ಪ್ರತಿವಾದಿಗಳು ಖಾತಾ ಬದಲಾವಣೆ ಮಾಡಿಸಿಕೊಳ್ಳುವ ಸಮಯದಲ್ಲಿ ತಕರಾರನ್ನು ಹಾಕಿರುವುದನ್ನು ಬಿಟ್ಟು ಇತರೇ ಯಾವುದೇ ಪತ್ರ ವ್ಯವಹಾರ ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ಪ್ರತಿವಾದಿಗಳನ್ನು ನಾನು ನೋಡಿರುವುದಿಲ್ಲ ಹಾಗೂ ಮಾತನಾಡಿಸಿರುವುದಿಲ್ಲ ಎಂದರೆ ಸರಿಯಲ್ಲ. ನಾನು ಪ್ರತಿವಾದಿಗಳಿಗೆ ಯಾವತ್ತು ಭೇಟಿ ಮಾಡಿರುವುದಿಲ್ಲ ಮತ್ತು ನಾನು ದಾವಾ ಶೆಡ್ಯೂಲ್ ಸ್ವತ್ತಿನ ಸ್ವಾಧೀನದಲ್ಲಿ ಇರುವ ಬಗ್ಗೆ ಯಾವ ವಿಷಯವನ್ನು ಅವರಿಗೆ ಹೇಳಿರುವುದಿಲ್ಲ ಎಂದರೆ ಸರಿಯಲ್ಲ. ದಾವಾ ಶೆಡ್ಯೂಲ್ ಸ್ವತ್ತಿನ ಸ್ವಾಧೀನದಲ್ಲಿ ಪ್ರತಿವಾದಿಗಳೇ ಇವತ್ತಿನವರೆಗೂ ಇರುತ್ತಾರೆ ಎಂದರೆ ಸರಿಯಲ್ಲ.

**:: ಮರು ವಿಚಾರಣೆ ಇಲ್ಲ ::**

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು).

ಓ ಹೇ ಕೇ ಸ ಇ ಎ ಒ

sd/-

ಸಿ.ಜೆ ಮತ್ತು ಹೆ. ಜೆ.ಎಂ.ಎಫ್.ಸಿ ನ್ಯಾಃ

ತರೀಕೆರೆ.

ಸಾಕ್ಷಿಯ ಸಹಿ: